33896

# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1035(1325) |
| ಸದಸ್ಯರ ಹೆಸರು | ಶ್ರೀ. ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದವರು | ಮಾನ್ಯ ಮುಖ್ಯಮಂತ್ರಿಯವರು |
| ಉತ್ತರಿಸಬೇಕಾದ ದಿನಾಂಕ | 29.12.2022 |

| ಕ್ರ ಸಂಖ್ಯೆ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ರಾಜ್ಯ ಸರ್ಕಾರದ ಇಲಾಖೆಗಳಲ್ಲಿ/ನಿಗಮ/ಮಂಡಳಿಗಳಲ್ಲಿ ಅಧಿಕಾರಿಗಳು ಅಥವಾ ಇತರೆ ಮಾನ್ಯರುಗಳು ಬಳಸುವ ವಾಹನಗಳನ್ನು ಖರೀದಿಸಲು ಇರುವ ನಿಯಮ/ಮಾನದಂಡಗಳೇನು; (ಮಾಹಿತಿ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 95 ಶಿಸನೇ 2010, ದಿನಾಂಕ:07.10.2020 ರ ಆದೇಶ ಭಾಗದ ಕ್ರಮ ಸಂಖ್ಯೆ:3ರಲ್ಲಿ ವಾಹನ ಸೌಕರ್ಯದ ಬಗ್ಗೆ ವಿವರಿಸಲಾಗಿದೆ. ಆದೇಶದ ಪ್ರತಿ ಅನುಬಂಧ-1 ರಲ್ಲಿರಿಸಿದೆ |
| ಆ) | ಈ ವಾಹನಗಳನ್ನು ಎಷ್ಟು ವರ್ಷ / ಎಷ್ಟು ಲಕ್ಷ ಕಿ.ಮೀಗಳವರೆಗೆ ಬಳಸಬಹುದು ಹಾಗೂ ಇವುಗಳನ್ನು ಯಾವ ಕಾರಣಗಳಿಂದ ಅನುಪಯುಕ್ತ ಎಂದು ಗುರುತಿಸಲಾಗುವುದು; (ವಿವರಗಳೊಂದಿಗೆ ಸರ್ಕಾರಿ ಆದೇಶದ ಪ್ರತಿಗಳನ್ನು ನೀಡುವುದು) | ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 153 ಶಿವಾನೀ 2013, ದಿನಾಂಕ: 12.12.2013ರನ್ವಯ ಆದೇಶ ಭಾಗದ ಕ್ರಮ ಸಂಖ್ಯೆ: 1, 2 ಮತ್ತು 3 ರಲ್ಲಿ ವಿವರಿಸಲಾಗಿದೆ. ಆದೇಶದ ಪ್ರತಿಯನ್ನು ಅನುಬಂಧ-2 ರಲ್ಲಿರಿಸಿದೆ |
| ಇ) | ನೂರಾರು ವಾಹನಗಳು ಸರ್ಕಾರದ ಹಲವು ಕಟ್ಟಡಗಳಲ್ಲಿ ತುಕ್ಕು ಹಿಡಿದು ನಿಂತಿರುವುದನ್ನು ಸರ್ಕಾರ ಗಮನಿಸಿದೆಯೇ; ಈ ವಾಹನಗಳನ್ನು ಯಾವ ರೀತಿಯಲ್ಲಿ ವಿಲೇ ಮಾಡಲಾಗುವುದು; (ವಿಕಾಸಸೌಧ, ಖನಿಜ ಭವನ, ಕೊಳಚೆ ಅಭಿವೃದ್ದಿ ಮಂಡಳಿ, ಕೃಷಿ ನಿರ್ದೇಶಕರ ಕಚೇರಿ ಕಟ್ಟಡ, ಗ್ರಾಮೀಣಾಭಿವೃದ್ದಿ ಭವನ ಹಾಗೂ ಇತರೆಡೆಗಳಲ್ಲಿ) | ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 137ಶಿವಾನಿ 2010, ದಿನಾಂಕ: 11.01.2010 ಆದೇಶದ ಪ್ರತಿಯನ್ನು ಅನುಬಂಧ-3ರಲ್ಲಿರಿಸಿದೆ. |
| ಈ) | ಈ ಅನುಪಯುಕ್ತ ವಾಹನಗಳನ್ನು ಯಾವ ರೀತಿಯಲ್ಲಿ ಎಷ್ಟು ದಿನಗಳಲ್ಲಿ ವಿಲೇಮಾಡಲಾಗುವುದು; ಇದಕ್ಕೆ ಇರುವ ನಿಯಮಗಳೇನು; (ವಿವರ ನೀಡುವುದು) | ಅನ್ವಯಿಸುವುದಿಲ್ಲ |
| ಉ) | ಸರ್ಕಾರ, ನಿಗಮ/ಮಂಡಳಿಗಳಲ್ಲಿ ದುರಸ್ತಿ ಮಾಡಿಸದೆ/ವಿಲೇಯನ್ನು ಮಾಡದೆ ಇದ್ದಲ್ಲಿ ಇದರಿಂದಾಗಿ ಸರ್ಕಾರಕ್ಕೆ ಆಗುವ ನಷ್ಟದ ಬಗ್ಗೆ ಅಭಿಪ್ರಾಯವೇನು; ಈ ರೀತಿಯಲ್ಲಿ ಯಾವುದೇ ನಿರ್ಧಾರ ತೆಗೆದುಕೊಳ್ಳದ ಅಧಿಕಾರಿಗಳ ಮೇಲೆ ಸರ್ಕಾರ ತೆಗೆದುಕೊಳ್ಳಬಹುದಾದ ಕ್ರಮಗಳೇನು? (ವಿವರ ನೀಡುವುದು) | ಅನ್ವಯಿಸುವುದಿಲ್ಲ |

ಸಿಆಸುಇ 168 ಶಿವಾನಿ 2022

(ಬಸವರಾಜ ಬೊಮ್ಮಾಯಿ)
ಮಾನ್ಯ ಮುಖ್ಯಮಂತ್ರಿ



Generated from eOffice by G JAGADEESHA, CMO-JS(GJ), JOINT SECREATRY, CMO on 16/12/2022 02 47 PM

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸಚಿವರ ಸ್ಥಾನಮಾನವನ್ನು ಹೊಂದಿರುವ ಕಾರ್ಯನಿರ್ವಾಹಕ / ಪ್ರಾಧಿಕಾರಗಳಿಗೆ ಸೌಲಭ್ಯಗಳನ್ನು ಒದಗಿಸುವ ಬಗ್ಗೆ ಪರಿಷ್ಕೃತ ಆದೇಶ.

*****

ಪ್ರಸ್ತಾವನೆ:

ರಾಜ್ಯದ ಸಮಗ್ರ ಅಭಿವೃದ್ಧಿಗಾಗಿ ರಾಜ್ಯದ ಸಂಪೂರ್ಣ ಸಾಮರ್ಥ್ಯವನ್ನು ಸಂಪೂರ್ಣ ಸದ್ಬಳಕೆ ಮಾಡುವ ಉದ್ದೇಶದಿಂದ ವಿವಿಧ ಕಾರ್ಯಕ್ರಮಗಳನ್ನು ರೂಪಿಸಿ ಅನುಷ್ಠಾನಗೊಳಿಸಲು ರಾಜ್ಯ ಸರ್ಕಾರವು ವಿವಿಧ ಆಯೋಗ/ ಸಮಿತಿ/ ಪ್ರಾಧಿಕಾರ/ ಮಿಷನ್/ಕಾರ್ಯಪಡೆಗಳನ್ನು ಹೊಸದಾಗಿ ರಚಿಸಿದ್ದು, ಅಧ್ಯಕ್ಷರುಗಳನ್ನು ನೇಮಿಸಿ ಅವರುಗಳಿಗೆ ಸೂಕ್ತ ಸ್ಥಾನಮಾನವನ್ನು ಸಹ ನೀಡಲಾಗಿದೆ. ಈ ಕಾರ್ಯನಿರ್ವಾಹಕರು/ ಪ್ರಾಧಿಕಾರಿಗಳ ವೆಚ್ಚಗಳನ್ನು ಸಂಬಂಧಪಟ್ಟ ಆಡಳಿತಾತ್ಮಕ ಇಲಾಖೆಗಳು ಭರಿಸುತ್ತಿರುವುದರಿಂದ ಈ ಕಾರ್ಯನಿರ್ವಾಹಕರು/ ಪ್ರಾಧಿಕಾರಿಗಳಿಗೆ ನೀಡಬೇಕಾದ ಸೌಲಭ್ಯಗಳ ಬಗ್ಗೆ ಇಲಾಖೆಗಳು ಸ್ಪಷ್ಟೀಕರಣಗಳನ್ನು ಕೋರಿರುವುದರ ಹಿನ್ನೆಲೆಯಲ್ಲಿ ಕಾರ್ಯನಿರ್ವಾಹಕರು / ಪ್ರಾಧಿಕಾರಗಳಿಗೆ ಸೌಲಭ್ಯಗಳನ್ನು ಒದಗಿಸುವ ಬಗ್ಗೆ ಮಾರ್ಗಸೂಚಿಗಳನ್ನು ಹೊರಡಿಸುವುದು ಅಗತ್ಯವೆಂದು ಮನಗಂಡು ಸಂಬಂಧಪಟ್ಟಂತೆ ಈ ಹಿಂದೆ ಹೊರಡಿಸಲಾಗಿರುವ ಎಲ್ಲಾ ಆದೇಶಗಳನ್ನು ಹಾಗೂ ಸುತ್ತೋಲೆಗಳನ್ನು ಕ್ರೋಢೀಕರಿಸಿ ಒಂದೇ ಆದೇಶವನ್ನು ಈ ಕೆಳಕಂಡಂತೆ ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 95 ಶಿಸನೇ 2020, ಬೆಂಗಳೂರು, ದಿನಾಂಕ:07.10.2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಸರ್ಕಾರವು ಸಚಿವರ ಸ್ಥಾನಮಾನವನ್ನು ಹೊಂದಿರುವ ಕಾರ್ಯನಿರ್ವಾಹಕ ಅಥವಾ ಪ್ರಾಧಿಕಾರಗಳು / ಆಯೋಗ/ ಸಮಿತಿ/ ಮಿಷನ್/ ಕಾರ್ಯಪಡೆಗಳು ಈ ಕೆಳಕಂಡಂತೆ ಸೌಲಭ್ಯಗಳನ್ನು ಹೊಂದತಕ್ಕದೆಂದು ಆದೇಶಿಸಿದೆ.

1) ವೇತನ ಮತ್ತು ಭತ್ಯೆಗಳು: ಕಾರ್ಯಕಾರಿ ಆದೇಶದ ಮೇರೆಗೆ ಸಚಿವರ, ರಾಜ್ಯ ಸಚಿವರ, ಉಪ ಸಚಿವರ ಸ್ಥಾನಮಾನ ನೀಡಿರುವ ಯಾವುದೇ ಕಾರ್ಯನಿರ್ವಾಹಕ ಪ್ರಾಧಿಕಾರವು 1956ರ ಕರ್ನಾಟಕ ಸಚಿವರುಗಳ ವೇತನ ಮತ್ತು ಭತ್ಯೆಗಳ ಅಧಿನಿಯಮ ಹಾಗೂ ಸಂಬಂಧಪಟ್ಟ ನಿಯಮಾವಳಿಯನ್ವಯ ವೇತನ, ಭತ್ಯೆ ಇತ್ಯಾದಿಗಳನ್ನು ಪಡೆಯಲು ಅರ್ಹರಿರುತ್ತಾರೆ.

2) ಮನೆ ಬಾಡಿಗೆ: ಅಂತಹ ಕಾರ್ಯನಿರ್ವಾಹಕ ಪ್ರಾಧಿಕಾರವು ತಮ್ಮ ಅಧಿಕಾರಾವಧಿಯಲ್ಲಿ ಬೆಂಗಳೂರು ನಗರದಲ್ಲಿ ಒಂದು ಸುಸಜ್ಜಿತ ನಿವಾಸವನ್ನು ಹೊಂದಲು ಅಥವಾ ಸುಸಜ್ಜಿತ ನಿವಾಸದ ಬದಲಿಗೆ ಬೆಂಗಳೂರು ನಗರದಲ್ಲಿ ಮಾಸಿಕ ರೂ.20,000 ಅಥವಾ ಇತರೆ ನಗರಗಳಲ್ಲಿ ಮಾಸಿಕ ರೂ. 15,000 ಮನೆ ಬಾಡಿಗೆ ಭತ್ಯೆ ಪಡೆಯಲು ಅರ್ಹರಿರುತ್ತಾರೆ. ಲೋಕೋಪಯೋಗಿ ಇಲಾಖೆಯ ಮೌಲ್ಯಮಾಪನಕ್ಕೆ ಒಳಪಟ್ಟು ಬೆಂಗಳೂರು ನಗರದಲ್ಲಿ ಮಾಸಿಕ ರೂ. 40,000 ಹಾಗೂ ಇತರೆ ನಗರಗಳಲ್ಲಿ ಮಾಸಿಕ ರೂ.20,000 ಗರಿಷ್ಠ ಬಾಡಿಗೆ ಮನೆಯನ್ನು ಪಡೆಯಬಹುದಾಗಿದೆ.

3) ವಾಹನ ಸೌಕರ್ಯ & ಇಂಧನ ಭತ್ಯೆ: ಕಾರ್ಯನಿರ್ವಾಹಕ ಪ್ರಾಧಿಕಾರವು ತಮ್ಮ ಅಧಿಕಾರಾವಧಿಯಲ್ಲಿ ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 03 ಶಿಸನೇ 2020 ದಿನಾಂಕ:12.06.2020 ರನ್ವಯ ಹಾಗೂ ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 271 ವೆಚ್ಚ 12/2020(ಇ-ಆಫೀಸ್) ದಿನಾಂಕ:03.06.2020 ರ ಸಹಮತಿಯ ಮೇರೆಗೆ ಸಂಬಂಧಪಟ್ಟ ಆಡಳಿತ ಇಲಾಖೆಯು ಆರ್ಥಿಕ ಇಲಾಖೆಯ ಅನುಮತಿಗೆ / ಸಹಮತಿಗೆ ಒಳಪಟ್ಟು ಹೊಸ ವಾಹನವನ್ನು ರೂ.20.00 ಲಕ್ಷಕ್ಕೆ ಮೀರದಂತೆ ಖರೀದಿಸಬಹುದು ಹಾಗೂ ಸಿಆಸು ಇಲಾಖೆಯಿಂದ ಅಧ್ಯಕ್ಷರುಗಳ ಉಪಯೋಗಕ್ಕಾಗಿ ತಾತ್ಕಾಲಿಕವಾಗಿ ನೀಡಿರುವ ವಾಹನಗಳನ್ನು ಆಡಳಿತ ಇಲಾಖೆಯಿಂದ ಹೊಸ ವಾಹನಗಳನ್ನು ಖರೀದಿಸಿದ ನಂತರ ಕುಮಾರ ಕೃಪ ಅತಿಥಿಗೃಹಕ್ಕೆ ಹಿಂದಿರುಗಿಸತಕ್ಕದ್ದು.



Generated from eOffice by VEERABHADRA HANCHINAL, DPAR-AS(PROTO)-VH, ADDITIONAL SECRETARY , DPAR on 20/12/2022 01:12 PM

ಸದರಿ ಅಧ್ಯಕ್ಷರುಗಳು ಮಾಸಿಕ 550 ಲೀಟರ್‌ಗೆ ಸಮಾನವಾದ ಇಂಧನ ಭತ್ಯೆಯನ್ನು ಪಡೆಯಲು ಅರ್ಹರಿರುತ್ತಾರೆ. ಹಾಗೂ ಅಧ್ಯಕ್ಷರುಗಳು ತಮ್ಮ ವಾಹನಗಳಿಗೆ ಕೆಂಪು ದೀಪವನ್ನು ಅಳವಡಿಸುವಂತಿಲ್ಲ.

4) ಆಪ್ತ ಸಿಬ್ಬಂದಿ: ಕಾರ್ಯನಿರ್ವಾಹಕ ಪ್ರಾಧಿಕಾರಗಳು ಈ ಕೆಳಕಂಡಂತೆ ಆಪ್ತ ಸಿಬ್ಬಂದಿಯನ್ನು ಹೊಂದಬಹುದು.

ಅ) ಆಪ್ತ ಕಾರ್ಯದರ್ಶಿ – 1 ಹುದ್ದೆ

ಆ) 'ಸಿ' ವೃಂದ – 2 ಹುದ್ದೆಗಳು

ಇ) 'ಡಿ' ವೃಂದ – 2 ಹುದ್ದೆಗಳು

ಈ) ವಾಹನ ಚಾಲಕ – 1 ಹುದ್ದೆ

ಈ ಹುದ್ದೆಗಳನ್ನು ನಿಯೋಜನೆ ಮೂಲಕ ತುಂಬತಕ್ಕದ್ದು, ಅಧ್ಯಕ್ಷರುಗಳು ಇಚ್ಛಿಸುವ ವ್ಯಕ್ತಿಗಳನ್ನು ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರ ಉದ್ದಿಮೆಗಳು ಅಥವಾ ಕೇಂದ್ರ ಸರ್ಕಾರ ಉದ್ದಿಮೆಗಳು ಅಥವಾ ಸ್ವಾಯತ್ತ ಸಂಸ್ಥೆಗಳು, ನಿಗಮ ಅಥವಾ ಸ್ಥಳೀಯ ಸಂಸ್ಥೆಗಳು ಇತ್ಯಾದಿಗಳಿಂದ ನಿಯೋಜನೆ ಮೂಲಕ ಪಡೆಯಬಹುದು. ಈ ನೇಮಕಾತಿಯು ಅಧ್ಯಕ್ಷರ ಅವಧಿಯೊಂದಿಗೆ ಮುಕ್ತಾಯಗೊಳ್ಳುವುದು.

ಮೇಲೆ ತಿಳಿಸಿರುವಂತೆ ಆಪ್ತ ಕಾರ್ಯದರ್ಶಿ ಹುದ್ದೆಯನ್ನು ಗ್ರೂಪ್ –ಎ ಅಥವಾ ಗ್ರೂಪ್ –ಬಿ ಶ್ರೇಣಿಯ ಅಧಿಕಾರಿಗಳನ್ನು ನಿಯೋಜನೆ ಮೂಲಕ ಭರ್ತಿ ಮಾಡಿಕೊಳ್ಳತಕ್ಕದ್ದು. ಉಳಿದ ಸಿಬ್ಬಂದಿ ಅಂದರೆ ಗ್ರೂಪ್ –ಸಿ ಮತ್ತು ಗ್ರೂಪ್ –ಡಿ ವರ್ಗದ ನೌಕರರನ್ನು ಆಡಳಿತ ಹಾಗೂ ಇನ್ನಿತರ ಇಲಾಖೆಗಳಲ್ಲಿ ಸೂಕ್ತ ಸಿಬ್ಬಂದಿ ಇಲ್ಲದಿದ್ದ ಪಕ್ಷದಲ್ಲಿ ಗುತ್ತಿಗೆ ಆಧಾರದ ಮೇಲೆ ಅಧ್ಯಕ್ಷರ ಕಾರ್ಯಾವಧಿವರೆಗೆ ಮಾತ್ರ ನೇಮಿಸಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯ ಉದ್ದಿಮೆಗಳ ಮಹೋದ್ಯಮದ ಮಾರ್ಗಸೂಚಿಗಳು (ಅಧ್ಯಕ್ಷರಿಗೆ ಆಪ್ತ ಸಿಬ್ಬಂದಿಗಳನ್ನು ನೀಡುವ ಬಗ್ಗೆ) ಅನ್ವಯಿಸುವುದಿಲ್ಲ. ಹಾಗೂ ಮೇಲೆ ನಿಗಧಿಪಡಿಸುವ ಸಿಬ್ಬಂದಿ ಮಾದರಿಯು ಅನ್ವಯಿಸುತ್ತದೆ.

5) ದೂರವಾಣಿ: ಕಾರ್ಯನಿರ್ವಾಹಕ ಪ್ರಾಧಿಕಾರದ ಅಧಿಕೃತ ಉಪಯೋಗಕ್ಕಾಗಿ ಒಂದು ನಿವಾಸ ದೂರವಾಣಿಯನ್ನು ಅವರ ಸ್ವಂತ ಗೃಹದಲ್ಲಿ ಅಥವಾ ಬಾಡಿಗೆ ಮೇಲೆ ಪಡೆದ ನಿವಾಸದಲ್ಲಿ ಒದಗಿಸತಕ್ಕದ್ದು.

6) ಪ್ರವಾಸಭತ್ಯೆ ಮತ್ತು ದಿನಭತ್ಯೆ: ಸಚಿವರುಗಳಿಗೆ ಅನ್ವಯಿಸುವ ಪ್ರವಾಸ ಭತ್ಯೆ ನಿಯಮಾವಳಿಯನ್ನು ಈ ಕಾರ್ಯನಿರ್ವಾಹಕ ಪ್ರಾದಿಕಾರಗಳಿಗೆ ವಿಸ್ತರಿಸಬಹುದಾಗಿದೆ. ರಾಜ್ಯದ ಹೊರಗಡೆ ಪ್ರವಾಸವು ಸೇರಿದಂತೆ ಮಾಸಿಕ ಪ್ರವಾಸದ ಅವಧಿಯನ್ನು ಸಂಪುಟ ದರ್ಜೆ ಹಾಗೂ ರಾಜ್ಯ ಸಚಿವ ಸ್ಥಾನಮಾನ ಹೊಂದಿರುವ ನಿಗಮ ಮಂಡಳಿಗಳ ಅಧ್ಯಕ್ಷರುಗಳಿಗೆ ಅನ್ವಯವಾಗುವಂತೆ ಅವರ ಕಾರ್ಯಬಾರದ ಆಧಾರದ ಮೇಲೆ ತಿಂಗಳಿಗೆ 20 ದಿವಸ ಪ್ರವಾಸ ಮಾಡಲು ಅನುಮತಿ ನೀಡಲಾಗಿದೆ. ಅವಶ್ಯವಿದ್ದಲ್ಲಿ ಮಾತ್ರ ರಾಜ್ಯದ ಹೊರಗಡೆ ಪ್ರವಾಸವನ್ನು ಕೈಗೊಳ್ಳತಕ್ಕದ್ದು.

7) ವೈದ್ಯಕೀಯ ವೆಚ್ಚ: ಕಾರ್ಯನಿರ್ವಾಹಕ ಪ್ರಾಧಿಕಾರಗಳ ಅಧ್ಯಕ್ಷರುಗಳು ವೈದ್ಯಕೀಯ ಸೌಲಭ್ಯಕ್ಕೆ ಅರ್ಹರಿರುವುದಿಲ್ಲ.

...3

8) ಇತರೆ: ಈ ಕಾರ್ಯನಿರ್ವಾಹಕ ಪ್ರಾಧಿಕಾರಗಳು ರಾಜ್ಯದ ಹೊರಗಡೆ ರಾಜ್ಯ ಅತಿಥಿ ಸೌಲಭ್ಯಕ್ಕೆ ಅರ್ಹರಿರುವುದಿಲ್ಲ. ಮುಂದುವರೆದು, ಆದ್ಯತಾಪಟ್ಟಿಯಲ್ಲಿ ಈ ಕಾರ್ಯನಿರ್ವಾಹಕ : ಪ್ರಾಧಿಕಾರಗಳ ದರ್ಜೆಯು, ಇವರುಗಳು ಶಾಸಕರಾಗಿದ್ದಲ್ಲಿ "ವಿಧಾನಸಭಾ ಸದಸ್ಯರು. ವಿಧಾನ ಪರಿಷತ್ತಿನ ಸದಸ್ಯರು" ಅಡಿಯಲ್ಲಿ ಇರತಕ್ಕದ್ದು.

9) ಕಛೇರಿ ಸ್ಥಳಾವಕಾಶ: ವಿಧಾನಸೌಧ, ವಿಕಾಸ ಸೌಧ ಮತ್ತು ಬಹುಮಹಡಿ ಕಟ್ಟಡಗಳಲ್ಲಿ ಸ್ಥಳಾವಕಾಶ ಲಭ್ಯವಿಲ್ಲದಿದ್ದಲ್ಲಿ ಈ ಕಾರ್ಯನಿರ್ವಾಹಕ ಪ್ರಾಧಿಕಾರಗಳಿಗೆ ಅಗತ್ಯವಾದ ಕಛೇರಿ ಸ್ಥಳಾವಕಾಶವನ್ನು ಸಂಬಂಧಪಟ್ಟ ಆಡಳಿತ ಇಲಾಖೆಗಳ ವ್ಯಾಪ್ತಿಗೊಳಪಡುವ ಕಛೇರಿ ಕಟ್ಟಡಗಳಲ್ಲಿ ಒದಗಿಸತಕ್ಕದ್ದು. ಹಾಗೂ ಪೀಠೋಪಕರಣ ಲೇಖನ ಸಾಮಗ್ರಿ ಇನ್ನಿತರ ಯಂತ್ರೋಪಕರಣಗಳನ್ನು ಮತ್ತು ಇತ್ಯಾದಿ ಸೌಲಭ್ಯಗಳನ್ನು ಆಡಳಿತ ಇಲಾಖೆಗಳೇ ಒದಗಿಸತಕ್ಕದ್ದು. ಈ ಬಗ್ಗೆ ಸಂಪೂರ್ಣ ವೆಚ್ಚವನ್ನು ಸಂಬಂಧಪಟ್ಟ ಮಂಡಳಿ ನಿಗಮ ಇತ್ಯಾದಿಗಳು ಭರಿಸತಕ್ಕದ್ದು, ಹಾಗೂ ನಷ್ಟದಲ್ಲಿರುವ ಮಂಡಳಿ ನಿಗಮಗಳಿಗೆ ಸಂಬಂಧಿಸಿದಂತೆ ಸಂಬಂಧಪಟ್ಟ ಆಡಳಿತ ಇಲಾಖೆಗಳು ಲಭ್ಯವಿರುವ ವಾರ್ಷಿಕ ಆಯವ್ಯಯದ ಅನುದಾನದಿಂದ ಆರ್ಥಿಕ ಸಹಾಯವನ್ನು ಒದಗಿಸುವ ಬಗ್ಗೆ ತೀರ್ಮಾನ ಕೈಗೊಳ್ಳತಕ್ಕದ್ದು. ಈ ಉದ್ದೇಶಕ್ಕಾಗಿ ಪ್ರತ್ಯೇಕವಾಗಿ ಹೆಚ್ಚುವರಿ ಆಯವ್ಯಯ ಅನುದಾನವನ್ನು ಮಂಜೂರು ಮಾಡಲಾಗುವುದಿಲ್ಲ. ಸರ್ಕಾರವು ಆಗಿಂದಾಗ್ಗೆ ಹೊರಡಿಸಿರುವ ಮಿತವ್ಯಯ ಆದೇಶವನ್ನು ಪಾಲಿಸಲು ಕ್ರಮ ಕೈಗೊಳ್ಳುವುದು. ಹಾಗೂ ಯಾವ ಉದ್ದೇಶಗಳಿಗೆ ಕಾರ್ಯಪಡೆ ರಚನೆಯಾಗಿದೆಯೋ ಆ ಉದ್ದೇಶಗಳನ್ನು ಗಮನದಲ್ಲಿಟ್ಟುಕೊಂಡು ನಿಗಧಿಪಡಿಸಿದ ಅವಧಿಯೊಳಗೆ ಗುರಿ ಸಾಧಿಸಲು ಸಂಬಂಧಪಟ್ಟ ಆಡಳಿತ ಇಲಾಖೆಗಳು ಎಲ್ಲಾ ರೀತಿಯ ಸಹಕಾರ ಮಾಹಿತಿ ಹಾಗೂ ಸೌಲಭ್ಯಗಳನ್ನು ಒದಗಿಸತಕ್ಕದ್ದು.

ಸರ್ಕಾರವು ಈಗಾಗಲೇ ರಚಿಸಲಾಗಿರುವ ಹಾಗೂ ಮುಂದೆ ರಚಿಸಲಿರುವ ಇಂತಹ ಎಲ್ಲಾ ಕಾರ್ಯನಿರ್ವಾಹಕ ಪ್ರಾಧಿಕಾರಗಳಿಗೆ ಸಚಿವರ ಸ್ಥಾನಮಾನ ನೀಡಿದ ನಂತರ ಮೇಲ್ಕಂಡ ಸೌಲಭ್ಯಗಳು ಷರತ್ತು ಮತ್ತು ನಿಬಂಧನೆಗಳು ಅನ್ವಯವಾಗುತ್ತವೆ.

4. ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂ: ಆಇ 820 ವೆಚ್ಚ-12/2011, ದಿನಾಂಕ: 01/12/2011 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮೊಹಮ್ಮದ ನಯೀಮ್ ಮೊಮಿನ್) ಕ.ಆ.ಸೇ
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿ.ಆ.ಸು ಇಲಾಖೆ(ರಾಜ್ಯ ಶಿಷ್ಟಾಚಾರ)

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು, ರಾಜ್ಯಪತ್ರದಲ್ಲಿ ಪ್ರಕಟಿಸಲು ಹಾಗೂ 300 ಪ್ರತಿಗಳನ್ನು ಸರಬರಾಜು ಮಾಡಲು ಕೋರಿದೆ.

ಪ್ರತಿಯನ್ನು:

1. ಮಹಾಲೇಖಪಾಲರು, (ಎ ಅಂಡ್ ಇ) / (ಆಡಿಟ್-1) (ಆಡಿಟ್-2) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.

....4



Generated from eOffice by VEERABHADRA HANCHINAL, DPAR-AS(PROTO)-VH, ADDITIONAL SECRETARY , DPAR on 20/12/2022 01:12 PM

3. ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ.

4. ಎಲ್ಲಾ ಆಯೋಗ/ ಸಮಿತಿ/ ಪ್ರಾಧಿಕಾರ/ ಮಿಷನ್/ ಕಾರ್ಯಪಡೆಯ ಅಧ್ಯಕ್ಷರುಗಳಿಗೆ.

5. ಮಾನ್ಯ ಮುಖ್ಯಮಂತ್ರಿಯವರ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.

6. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವೆಚ್ಚ-12, ವಿಧಾನಸೌಧ, ಬೆಂಗಳೂರು.

7. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.

8. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು.

9. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.



Generated from eOffice by VEERABHADRA HANCHINAL, DPAR-AS(PROTO)-VH, ADDITIONAL SECRETARY , DPAR on 20/12/2022 01:12 PM

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 67 ಶಿಸನೇ 2022.

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ:02.11.2022.

## ತಿದ್ದುಪಡಿ ಆದೇಶ

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 95 ಶಿಸನೇ 2020, ಬೆಂಗಳೂರು, ದಿನಾಂಕ:07.10.2020 ರಲ್ಲಿ ಹೊರಡಿಸಿರುವ ಸರ್ಕಾರದ ಆದೇಶದ ನಾಲ್ಕನೇ ಅಂಶದಲ್ಲಿರುವ ಆಪ್ತ ಕಾರ್ಯದರ್ಶಿ ಹುದ್ದೆಯನ್ನು ನಿಯೋಜನೆ ಮೂಲಕ ಭರ್ತಿ ಮಾಡಿಕೊಳ್ಳತಕ್ಕದ್ದು ಎನ್ನುವ ಬದಲಾಗಿ, **ನಿಯೋಜನೆ/ಗುತ್ತಿಗೆ** ಆಧಾರದ ಮೇಲೆ ಭರ್ತಿ ಮಾಡಿಕೊಳ್ಳತಕ್ಕದ್ದು ಎಂದು ತಿದ್ದಿ ಓದಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

T.V. Sunandamma 02/11/2022
(ಟಿ.ವಿ.ಸುನಂದಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ-2
ಸಿಬ್ಬಂದಿ ಮತ್ತು ಆಡಳಿತ ಸುದಾರಣೆ ಇಲಾಖೆ
(ರಾಜ್ಯ ಶಿಷ್ಟಾಚಾರ).

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು – ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಲು ಹಾಗೂ 100 ಪ್ರತಿಗಳನ್ನು ಸರ್ಕಾರಕ್ಕೆ ಕಳುಹಿಸಿಕೊಡಲು.

**ಪ್ರತಿ:**

1. ಮಹಾಲೇಖಪಾಲರು(ಎ ಆಂಡ್ ಇ)/(ಆಡಿಟ್-1)/ಆಡಿಟ್-2), ಕರ್ನಾಟಕ, ಬೆಂಗಳೂರು.
2. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಎಲ್ಲಾ ಅಪರ ಮುಖ್ಯಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ/ವಿಕಾಸಸೌಧ/ಬಹುಮಹಡಿ ಕಟ್ಟಡ, ಬೆಂಗಳೂರು.
5. ಎಲ್ಲಾ ಮಾನ್ಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ/ವಿಕಾಸಸೌಧ, ಬೆಂಗಳೂರು.
6. ಎಲ್ಲಾ ಜಿಲ್ಲಾಧಿಕಾರಿಗಳು/ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಹಣಾಧಿಕಾರಿಗಳು.
7. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
8. ಸರ್ಕಾರದ ಅಪರ ಕಾರ್ಯದರ್ಶಿಗಳು, ಸಿಆಸುಇ (ಆಡಳಿತ), ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಸಿಆಸುಇ (1/2&3 ಆಡಳಿತ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
10. ಸರ್ಕಾರದ ಅಧೀನ ಕಾರ್ಯದರ್ಶಿ, ಸಿಆಸುಇ(ಐ.ಆರ್.ಎಲ್.ಎ/ಲೆಕ್ಕಪತ್ರ-1/2/3), ಬಹುಮಹಡಿಗಳ ಕಟ್ಟಡ, ಬೆಂಗಳೂರು.
11. ಸರ್ಕಾರದ ಅಪರ ಕಾರ್ಯದರ್ಶಿ, ಸಿಬ್ಬಂದಿ ಆಡಳಿತ ಸುಧಾರಣೆ ಇಲಾಖೆ(ರಾಜ್ಯ ಶಿಷ್ಟಾಚಾರ) ರವರ ಆಪ್ತ ಸಹಾಯಕರು, ವಿಧಾನಸೌಧ, ಬೆಂಗಳೂರು.
12. ವಿಶೇಷಾಧಿಕಾರಿಗಳು, ಕುಮಾರ ಕೃಪ ಅತಿಥಿ ಗೃಹ, ಹೈಗ್ರೌಂಡ್ಸ್, ಬೆಂಗಳೂರು.
13. ಪತ್ರಿಕಾ ವಿಭಾಗ / ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.



Generated from eOffice by VEERABHADRA HANCHINAL, DPAR-AS(PROTO)-VH, ADDITIONAL SECRETARY , DPAR on 20/12/2022 01:12 PM

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸರ್ಕಾರದ ವಿವಿಧ ಇಲಾಖೆಗಳಲ್ಲಿ ದುರಸ್ಥಿಯಾಗದ/ದುರಸ್ಥಿ ಮಾಡಲಾಗದ ಅನುಪಯುಕ್ತ ವಾಹನಗಳನ್ನು ವಿಲೇವಾರಿ ಮಾಡುವ ಬಗ್ಗೆ.

ಓದಲಾಗಿದೆ:

ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 153 ಶಿವಾನೀ 2013, ದಿನಾಂಕ: 21.08.2013.

ಪ್ರಸ್ತಾವನೆ:

ಮೇಲೆ ಓದಲಾದ ಆದೇಶದಲ್ಲಿ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಹಳೆಯ ವಾಹನಗಳನ್ನು ಅನುಪಯುಕ್ತವೆಂದು ಘೋಷಿಸುವಾಗ ಇರುವ ಮಾನದಂಡಗಳನ್ನು ಪರಿಷ್ಕರಿಸಲು ಮತ್ತು ಸರ್ಕಾರದ ವಿವಿಧ ಇಲಾಖೆಗಳಲ್ಲಿ ದುರಸ್ಥಿಯಾಗದೇ ಇರುವ/ಮಾಡಲಾಗದ ಅನುಪಯುಕ್ತ ವಾಹನಗಳನ್ನು ವಿಲೇವಾರಿ ಮಾಡುವ ಬಗ್ಗೆ ಮಾರ್ಗಸೂಚಿಗಳನ್ನು ಪರಿಷ್ಕರಿಸಲು ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಒಂದು ಸಮಿತಿಯನ್ನು ರಚಿಸಲಾಗಿತ್ತು. ಈ ಸಮಿತಿ ಸಾರಿಗೆ ಇಲಾಖೆಯು ಸರ್ಕಾರದ ಎಲ್ಲಾ ಇಲಾಖೆಗಳ ವಾಹನಗಳನ್ನು ಅನುಪಯುಕ್ತವೆಂದು ಘೋಷಿಸುವಾಗ ಇರುವ ಮಾನದಂಡಗಳನ್ನು ಪರಿಷ್ಕರಿಸಿ, ಶಿಫಾರಸ್ಸು ಮಾಡಲು ಆದೇಶದಲ್ಲಿ ಸೂಚಿಸಲಾಗಿತ್ತು. ಸದರಿ ಸಮಿತಿಯು ದಿನಾಂಕ: 23.10.2013 ರಂದು ನಡೆಸಿದ ಸಭೆಯಲ್ಲಿ ಚರ್ಚಿಸಿ ಮಾಡಿರುವ ಶಿಫಾರಸ್ಸುಗಳನ್ವಯ ಈ ಕೆಳಕಂಡಂತೆ ಆದೇಶಿಸಿದೆ.

ಆದೇಶ ಸಂಖ್ಯೆ: ಸಿಆಸುಇ 153 ಶಿವಾನೀ 2013, ಬೆಂಗಳೂರು, ದಿನಾಂಕ: 12.12.2013.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರದ ವಿವಿಧ ಇಲಾಖೆಗಳಲ್ಲಿ ದುರಸ್ಥಿಯಾಗದ / ದುರಸ್ಥಿ ಮಾಡಲಾಗದ ಅನುಪಯುಕ್ತ ಸರ್ಕಾರಿ ವಾಹನಗಳನ್ನು ಈ ಕೆಳಕಂಡ ಷರತ್ತುಗಳನ್ವಯ ತಕ್ಷಣದಿಂದ ಜಾರಿಗೆ ಬರುವಂತೆ ವಿಲೇವಾರಿ ಮಾಡುವಂತೆ ಆದೇಶಿಸಿದೆ:

1. ಯಾವುದೇ ವಾಹನವನ್ನು ಅನುಪಯುಕ್ತವೆಂದು ಪರಿಗಣಿಸಲು ಕನಿಷ್ಟ 7 ವರ್ಷ ಪೂರೈಸಿರಬೇಕು.
2. ಲಘು ಮೋಟಾರು ವಾಹನ ಕನಿಷ್ಟ 2.00 ಲಕ್ಷ ಕಿ.ಮೀ. ಕ್ರಮಿಸಿರಬೇಕು.
3. ಸಾರಿಗೆ ಇಲಾಖೆ ಅಧಿಕಾರಿಗಳಿಗೆ ಕ್ರಮ ಸಂಖ್ಯೆ 1 ಮತ್ತು 2 ರಲ್ಲಿ ತಿಳಿಸಿದಂತೆ, ಈ ಮಾನದಂಡ ಪಾಲಿಸಿದ ವಾಹನವನ್ನು ಅನುಪಯುಕ್ತವೆಂದು ಘೋಷಿಸಿ, ಇವುಗಳನ್ನು ಸಾರ್ವಜನಿಕ ಹರಾಜಿನಲ್ಲಿ ವಿಲೇವಾರಿ ಮಾಡುವ ಬಗ್ಗೆ ಆ ವಾಹನದ ಕನಿಷ್ಟ ಮೌಲ್ಯವನ್ನು ನಿಗಧಿಪಡಿಸುವಲ್ಲಿ ಅಧಿಕಾರ ನೀಡಲಾಗಿದೆ.
4. ಸರ್ಕಾರದ ಆದೇಶ ಸಂಖ್ಯೆ. ಸಿಆಸುಇ 137 ಶಿವಾನೀ 2010, ದಿನಾಂಕ 11-01-2011 ರಲ್ಲಿ ಆದೇಶಿಸಿದಂತೆ, ಇಲಾಖಾ ಮುಖ್ಯಸ್ಥರು ಮತ್ತು ಜಿಲ್ಲಾಧಿಕಾರಿಗಳ ನೇತೃತ್ವದ ಸಮಿತಿಗಳು ಸಾರ್ವಜನಿಕ ಹರಾಜು ಮೂಲಕ ಹಳೆಯ ವಾಹನಗಳ ವಿಲೇವಾರಿಯ ಪ್ರಕ್ರಿಯೆಯನ್ನು ಮುಂದುವರಿಸುವುದು.



Generated from eOffice by VEERABHADRA HANCHINAL, DPAR-AS(PROTO)-VH, ADDITIONAL SECRETARY . DPAR on 20/12/2022 01:12 PM

5. ~~ಹಳೆಯ ವಾಹನಗಳ ವಿಲೇವಾರಿ ಆದ ನಂತರ ಇಲಾಖಾ ಮುಖ್ಯಸ್ಥರು ಆಯಾ ಇಲಾಖೆಗಳ~~ ಅನುದಾನದಲ್ಲಿ ಹೊಸ ವಾಹನ ಖರೀದಿಸಲು ಅನುದಾನವನ್ನು ಪಡೆದುಕೊಂಡು ಹೊಸ ವಾಹನ ಖರೀದಿಸುವ ಬಗ್ಗೆ ಸರ್ಕಾರದಿಂದ ಕಾಲಕಾಲಕ್ಕೆ ಹೊರಡಿಸಿದ ಮಿತಿಗೊಳಪಟ್ಟು ವಾಹನ ಖರೀದಿಸಬಹುದಾಗಿದೆ.

~~2. ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 1060 ವೆಚ್ಚ-12/2013, ದಿನಾಂಕ: 06.12.2013 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.~~

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ,

(ಎಸ್. ನಾಗರಾಜಪ್ಪ) 12/12
ಸರ್ಕಾರದ ಅಧೀನ ಕಾರ್ಯದರ್ಶಿ-2,
ಸಿ. & ಆ.ಸು. ಇಲಾಖೆ (ರಾಜ್ಯ ಶಿಷ್ಟಾಚಾರ).

ಇವರಿಗೆ:-

1. ಮಹಾಲೇಖಪಾಲರು (ಎ & ಇ) / (ಆಡಿಟ್-1) / (ಆಡಿಟ್-2), ಕರ್ನಾಟಕ, ಬೆಂಗಳೂರು-1.
2. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
3. ಸರ್ಕಾರದ ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
4. ಎಲ್ಲಾ ಜಿಲ್ಲಾಧಿಕಾರಿಗಳು.
5. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ.
7. ~~ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ.~~
8. ~~ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಿಆಸುಇ, ವಿಧಾನ ಸೌಧ.~~
9. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಾರಿಗೆ ಇಲಾಖೆ, ಬಹುಮಹಡಿಗಳ ಕಟ್ಟಡ.
10. ಸಾರಿಗೆ ಆಯುಕ್ತರು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
11. ಮಾನ್ಯ ಸಾರಿಗೆ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
12. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.



Generated from eOffice by VEERABHADRA HANCHINAL, DPAR-AS(PROTO)-VH, ADDITIONAL SECRETARY , DPAR on 20/12/2022 01:12 PM

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸರ್ಕಾರದ ವಿವಿಧ ಇಲಾಖೆಗಳಲ್ಲಿ ದುರಸ್ತಿಯಾಗದ/ ದುರಸ್ತಿ ಮಾಡಲಾಗದ ಅನುಪಯುಕ್ತ ವಾಹನಗಳನ್ನು ವಿಲೇವಾರಿ ಮಾಡುವ ಬಗ್ಗೆ.

------

ಓದಲಾಗಿದೆ:

1. ದಿನಾಂಕ:05/01/2001 ರ ಸರ್ಕಾರದ ಆದೇಶ ಸಂ: ಸಿಆಸುಇ 142 ಶಿವಾನೀ 2000.
2. ದಿನಾಂಕ:29/11/2010 ರ ಸರ್ಕಾರದ ಆದೇಶ ಸಂ: ಸಿಆಸುಇ 137 ಶಿವಾನೀ 2010.

ಪ್ರಸ್ತಾವನೆ:

ಮೇಲೆ ಕ್ರಮ ಸಂ:(1) ರಲ್ಲಿ ಓದಲಾದ ದಿನಾಂಕ:05/01/2001 ರ ಸರ್ಕಾರಿ ಆದೇಶದಲ್ಲಿ ಸರ್ಕಾರದ ವಿವಿಧ ಇಲಾಖೆಗಳಲ್ಲಿ ದುರಸ್ತಿಯಾಗದ : ದುರಸ್ತಿ ಮಾಡಲಾಗದ ಅನುಪಯುಕ್ತ ಸರ್ಕಾರಿ ವಾಹನಗಳನ್ನು ವಿಲೇವಾರಿ ಮಾಡುವ ಕುರಿತಂತೆ ಸದರಿ ಆದೇಶದಲ್ಲಿ ನಮೂದಿಸಿರುವ ಷರತ್ತುಗಳನ್ವಯ ಕ್ರಮ ಜರುಗಿಸುವಂತೆ ಆದೇಶಿಸಲಾಗಿತ್ತು.

ಮೇಲಿನ ಕ್ರಮ ಸಂ:(2) ರಲ್ಲಿ ಓದಲಾದ ದಿನಾಂಕ:29/11/2010 ರ ಸರ್ಕಾರಿ ಆದೇಶದಲ್ಲಿ ಸರ್ಕಾರದ ವಿವಿಧ ಇಲಾಖೆಗಳಲ್ಲಿ ದುರಸ್ತಿಯಾಗದ:ದುರಸ್ತಿ ಮಾಡಲಾಗದ ಅನುಪಯುಕ್ತ ವಾಹನಗಳನ್ನು ವಿಲೇವಾರಿ ಮಾಡುವ ಕುರಿತಂತೆ ಕ್ರಮ ಸಂಖ್ಯೆ: (1) ರಲ್ಲಿ ಓದಲಾದ ದಿನಾಂಕ:05/01/2001 ರ ಆದೇಶವನ್ನು ಪರಿಷ್ಕರಿಸಿ ಸದರಿ ಆದೇಶದಲ್ಲಿ ನಮೂದಿಸಿರುವ ಷರತ್ತುಗಳನ್ವಯ ಕ್ರಮ ಜರುಗಿಸುವಂತೆ ಆದೇಶಿಸಲಾಗಿತ್ತು.

ದಿನಾಂಕ:29/11/2010 ರ ಆದೇಶದಲ್ಲಿ ಅನುಪಯುಕ್ತ ವಾಹನಗಳ ವಿಲೇವಾರಿ ಕುರಿತಂತೆ ಹೊರಡಿಸಲಾದ ಸೂಚನೆಗಳ ಬಗ್ಗೆ ಮುಂದೆ ಉದ್ಭವಿಸಬಹುದಾದ ತೊಡಕುಗಳ ಹಿನ್ನೆಲೆಯಲ್ಲಿ ಪುನರ್ ಪರಿಶೀಲಿಸಲಾಗಿದೆ. ಯಾವುದೇ ಬಿಡಿಭಾಗಗಳನ್ನು ವಿಲೇವಾರಿ ಮಾಡಬೇಕಾದಲ್ಲಿ ಅವುಗಳ ಒಟ್ಟು ಮೌಲ್ಯ ರೂ.1.00 ಲಕ್ಷಗಳಿಗಿಂತ ಹೆಚ್ಚಿಗೆ ಇದ್ದಲ್ಲಿ ಕೆ.ಟಿ.ಪಿ.ಪಿ ಕಾಯ್ದೆ 1999 ರನ್ವಯ ನಿಯಮಾನುಸಾರ ಟೆಂಡರ್–ಕಂ–ಬಹಿರಂಗ ಹರಾಜಿನಲ್ಲಿ ವಿಲೇವಾರಿ ಮಾಡಬೇಕಾಗುತ್ತದೆ. ಪ್ರಸ್ತುತ ಆದೇಶ ಸಂಖ್ಯೆ: ಸಿಆಸುಇ 137 ಶಿವಾನೀ 2010, ದಿನಾಂಕ:29/11/2010 ವು ಮೇಲಿನ ನಿಯಮಗಳಿಗೆ ವ್ಯತಿರಿಕ್ತವಾಗುತ್ತದೆ. ವಾಹನಗಳ ವಿಲೇವಾರಿಯನ್ನು ಪ್ರಾದೇಶಿಕ ಸಾರಿಗೆ ಅಧಿಕಾರಿಯವರಿಂದ ಮೌಲ್ಯಮಾಪನ ಮಾಡಿಸಿ, ಆರ್ಥಿಕ ಇಲಾಖೆಯ ಅನುಮೋದನೆ ಪಡೆದು ಟೆಂಡರ್–ಕಂ–ಹರಾಜಿನ ಮುಖಾಂತರ ವಿಲೇವಾರಿ ಮಾಡಬೇಕು. ಆದ್ದರಿಂದ ಈ ಕೆಳಕಂಡಂತೆ ಆದೇಶ.

## ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 137 ಶಿವಾನೀ 2010, ಬೆಂಗಳೂರು, ದಿನಾಂಕ 11.01.2011.

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನಲೆಯಲ್ಲಿ ದಿನಾಂಕ:29/11/2010 ರ ಆದೇಶ ಸಂ: ಸಿಆಸುಇ 137 ಶಿವಾನೀ 2010 ನ್ನು ಪರಿಷ್ಕರಿಸಿ, ಕರ್ನಾಟಕ ಸರ್ಕಾರದ ವಿವಿಧ ಇಲಾಖೆಗಳಲ್ಲಿ ದುರಸ್ತಿಯಾಗದ : ದುರಸ್ತಿಮಾಡಲಾಗದ ಅನುಪಯುಕ್ತ ಸರ್ಕಾರಿ ವಾಹನಗಳನ್ನು ಈ ಕೆಳಕಂಡ ಷರತ್ತಿನನ್ವಯ ತಕ್ಷಣದಿಂದ ಜಾರಿಗೆ ಬರುವಂತೆ ವಿಲೇವಾರಿ ಮಾಡುವಂತೆ ಆದೇಶಿಸಿದೆ.

.........2



Generated from eOffice by VEERABHADRA HANCHINAL, DPAR-AS(PROTO)-VH, ADDITIONAL SECRETARY , DPAR on 20/12/2022 01:12 PM

1) ಇಲಾಖಾ ಮುಖ್ಯಸ್ಥರ ನೇರ ಆಡಳಿತ ಹತೋಟಿಯಲ್ಲಿರುವ ವಾಹನಗಳ ವಿಲೇವಾರಿಯನ್ನು ಆಯಾಯ ಇಲಾಖಾ ಮುಖ್ಯಸ್ಥರೇ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಮೂಲಕ ವಾಹನಗಳ ಮೌಲ್ಯಮಾಪನ ಮಾಡಿಸಿ ಹಾಗೂ ಅಂತಹ ವಾಹನಗಳನ್ನು ಅನುಪಯುಕ್ತವೆಂದು ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಂದ ದೃಢೀಕರಣ ಪತ್ರ ಪಡೆದು ಯಾವ ವಿಳಂಬವಾಗದಂತೆ ಟೆಂಡರ್-ಕಂ-ಹರಾಜಿನ ಮುಖಾಂತರ ವಿಲೇವಾರಿ ಮಾಡತಕ್ಕದ್ದು. ಆ ರೀತಿ ಇಲಾಖಾ ಮುಖ್ಯಸ್ಥರು ಮಾಡುವ ಟೆಂಡರ್-ಕಂ-ಹರಾಜುಗಳನ್ನು ದೃಢೀಕರಣ ಮಾಡಲು ಸಂಬಂಧಪಟ್ಟ ಇಲಾಖಾ ಮುಖ್ಯಸ್ಥರಿಗೆ ಅಧಿಕಾರ ಪ್ರತ್ಯಾಯೋಜಿಸಲಾಗಿದೆ.

2) ಜಿಲ್ಲಾ, ಉಪ ವಿಭಾಗ, ತಾಲ್ಲೂಕು ಮಟ್ಟದಲ್ಲಿರುವ ವಿವಿಧ ಇಲಾಖೆಗಳಿಗೆ ಸೇರಿದ ಎಲ್ಲಾ ಅನುಪಯುಕ್ತ ಹಳೆಯ ವಾಹನಗಳನ್ನು ಯಾವ ವಿಳಂಬವಿಲ್ಲದೆ ತ್ವರಿತವಾಗಿ ವಿಲೇವಾರಿ ಮಾಡಿಸುವುದಕ್ಕಾಗಿ ಪ್ರತಿ ಜಿಲ್ಲೆಯಲ್ಲಿ ಸರ್ಕಾರವು ಈ ಕೆಳಕಂಡ ಸಮಿತಿಯನ್ನು ರಚಿಸಿದೆ.

1. ಜಿಲ್ಲಾಧಿಕಾರಿಗಳು - ಅಧ್ಯಕ್ಷರು
2. ಜಿಲ್ಲಾ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು - ಸದಸ್ಯರು
3. ಪೋಲೀಸ್ ಸೂಪರಿಂಟೆಂಡೆಂಟ್ - ಸದಸ್ಯರು
4. ಪ್ರಾದೇಶಿಕ ಸಾರಿಗೆ ಅಧಿಕಾರಿಗಳು - ಸದಸ್ಯರು

ಹಾಲಿ ನಿಯಮಾವಳಿಯನ್ವಯ ಹಳೆಯ ವಾಹನಗಳನ್ನು (ಅನುಪಯುಕ್ತಗೊಳಿಸಲಾದ ಹಳೆಯ ವಾಹನ) ಪರಿಶೀಲಿಸಿ ನಿಯಮಾವಳಿಯ ರೀತ್ಯಾ ಟೆಂಡರ್-ಕಂ-ಹರಾಜು ಮೂಲಕ ವಿಲೇವಾರಿ ಮಾಡಲು ಹಾಗೂ ಟೆಂಡರ್-ಕಂ-ಹರಾಜನ್ನು ದೃಢೀಕರಿಸುವ ಅಧಿಕಾರವನ್ನು ಸದರಿ ಸಮಿತಿಗೆ ಪ್ರತ್ಯಾಯೋಜಿಸಲಾಗಿದೆ.

ಸದರಿ ಸಮಿತಿಗಳು ಟೆಂಡರ್-ಕಂ-ಹರಾಜಿನ ಮೂಲಕ ಮಾಡುವ ವಿಲೇವಾರಿಯಿಂದ ಸ್ವೀಕೃತವಾಗುವ ಮೊಬಲಗನ್ನು (ರಾಜಸ್ವ) ಆಯಾಯ ಇಲಾಖೆಗಳ ಸ್ವೀಕೃತಿಗೆ ಸಂಬಂಧಪಟ್ಟ ಲೆಕ್ಕ ಶೀರ್ಷಿಕೆ (ರೆಸಿಪ್ಟ್ ಹೆಡ್ ಆಫ್ ಅಕೌಂಟ್) ಗೆ ಜಮಾ ಮಾಡತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ,

(ಕೆ.ಪಿ.ರಾಮು)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿ.ಆ.ಸು.ಇಲಾಖೆ(ರಾಜ್ಯ ಶಿಷ್ಟಾಚಾರ).

ಇವರಿಗೆ:

1. ಮಹಾಲೇಖಪಾಲರು (ಎ. ಅಂಡ್ ಇ.) / (ಆಡಿಟ್-1) / (ಆಡಿಟ್-2), ಕರ್ನಾಟಕ, ಬೆಂಗಳೂರು-560001
2. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು.
5. ಸರ್ಕಾರದ ಎಲ್ಲಾ ಇಲಾಖಾ ಮುಖ್ಯಸ್ಥರುಗಳು.(ಎಲ್ಲಾ ಘಟಕಾಧಿಕಾರಿಗಳಿಗೆ ತಮ್ಮ ಮುಖಾಂತರ ತಿಳಿಸುವುದು).
6. ವಿಶೇಷಾಧಿಕಾರಿಗಳು, ಕುಮಾರ ಕೃಪ ಅತಿಥಿಗೃಹ, ಹೈಗ್ರೌಂಡ್ಸ್, ಬೆಂಗಳೂರು.
7. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, (ವೆಚ್ಚ-12), ವಿಧಾನಸೌಧ, ಬೆಂಗಳೂರು.
8. ಮೆ: ಭಾರತ್ ಮಾತ ವ್ಯವಸಾಯೋತ್ಪನ್ನ ಮತ್ತು ಸಹಕಾರ ಸಂಘ, ... 4ನೇ ಕ್ರಾಸ್, ಹೆಗಡೆನಗರ, ... 560045.


Generated from eOffice by VEERABHADRA HANCHINAL, DPAR-AS(PROTO)-VH, ADDITIONAL SECRETARY , DPAR on 20/12/2022 01:12 PM